ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ಸಂಖ್ಯೆ: ಕವಿಪ್ರನಿನಿ/ಬಿ16/9457/2019-20** **ದಿನಾಂಕ:** 20 JUN 2020

## ಸುತ್ತೋಲೆ

**ವಿಷಯ:** ಕೋವಿಡ್-19 ವೈರಾಣು ಹರಡುವಿಕೆಯನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ.

**ಉಲ್ಲೇಖ:** ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/9457/2019-20, ದಿನಾಂಕ: 15.04.2020.

*****

ನಿಗಮದ ಕಚೇರಿಗಳಿಗೆ ಹಾಜರಾಗುವ ಎಲ್ಲಾ ಅಧಿಕಾರಿ/ನೌಕರರು ಕೋವಿಡ್-19 ವೈರಾಣು ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾಗುವ ಮುಂಜಾಗ್ರತಾ ಕ್ರಮದ ಬಗ್ಗೆ ಮಾರ್ಗಸೂಚಿಯನ್ನು ಈಗಾಗಲೇ ಉಲ್ಲೇಖದ ಸುತ್ತೋಲೆಯಲ್ಲಿ ಹೊರಡಿಸಲಾಗಿದೆ. ಪ್ರಸ್ತುತ ಕೋವಿಡ್-19 ವೈರಾಣು ಹರಡುವಿಕೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ, ಎಲ್ಲಾ ಅಧಿಕಾರಿ/ನೌಕರರು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಲಾಗಿದೆ:

1. ಯಾವುದೇ ಸಾರ್ವಜನಿಕರು ಕಚೇರಿಗಳಿಗೆ ಅನಗತ್ಯವಾಗಿ ಭೇಟಿ ನೀಡದಂತೆ ನಿರ್ಬಂಧವನ್ನು ವಿಧಿಸುವುದು ಹಾಗೂ ಇತರೆ ಕಚೇರಿಗಳಿಂದಲೂ ಅಧಿಕಾರಿ/ನೌಕರರ ಅನಾವಶ್ಯಕ ಭೇಟಿಯನ್ನು ನಿರ್ಬಂಧಿಸುವುದು.
2. ಎಲ್ಲಾ ಅಧಿಕಾರಿ/ನೌಕರರು ಒಂದೇ ದ್ವಾರದಿಂದ ಪ್ರವೇಶ/ನಿರ್ಗಮನ ಮಾಡುವಂತೆ ವ್ಯವಸ್ಥೆ ಮಾಡುವುದು. ಅಧಿಕ ಪ್ರವೇಶ ದ್ವಾರಗಳನ್ನು ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸುವುದು.
3. ಎಲ್ಲಾ ಪ್ರವೇಶ ದ್ವಾರಗಳಲ್ಲಿ ಕಡ್ಡಾಯವಾಗಿ ಸ್ವಯಂಚಾಲಿತ ಹಸ್ತ ನೈರ್ಮಲೀಕರಣ ಸೌಲಭ್ಯವನ್ನು (Self-dispensing hand hygiene facilities) ಒದಗಿಸಲು ವ್ಯವಸ್ಥೆ ಮಾಡುವುದು.
4. ಎಲ್ಲಾ ಕರ್ಚೇರಿಗಳಲ್ಲಿ ನೌಕರರು ಕಚೇರಿಗೆ ಹಾಜರಾಗುವ ಮತ್ತು ನಿರ್ಗಮಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಥರ್ಮಲ್ ಸ್ಕ್ಯಾನಿಂಗ್‌ಗೆ ಒಳಪಡುವುದು.
5. ಕಚೇರಿಯ ಆವರಣದೊಳಗೆ ನಿಗದಿತ ಸ್ಥಳಗಳಲ್ಲಿ ಹಸ್ತ ನಿರ್ಮಲೀಕಾರಕ (Hand sanitizer) ಒದಗಿಸುವುದು ಹಾಗೂ ಶೌಚಾಲಯಗಳಲ್ಲಿ ಸಾಬೂನು ದ್ರಾವಣವನ್ನು ಇಡಲು ವ್ಯವಸ್ಥೆ ಮಾಡಿ ಬಳಕೆದಾರ ಸ್ನೇಹಿ ಸೋಂಕುನಿವಾರಕಗಳನ್ನು ಬಳಸುವುದು.
6. ನಿಗಮದ ಎಲ್ಲಾ ಕಚೇರಿಗಳಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು.
7. ಲಿಫ್ಟ್‌ಗಳನ್ನು ಉಪಯೋಗಿಸುವ ಸಮಯದಲ್ಲಿ, ಒಮ್ಮೆಗೆ 2 ಜನರು ಮಾತ್ರ ಬಳಸುವುದು. ಆದಾಗ್ಯೂ ನೌಕರರು ಮೆಟ್ಟಿಲುಗಳನ್ನು ಬಳಸಲು ಉತ್ತೇಜಿಸುವುದು.
8. ಕಚೇರಿಯ ಆವರಣದಲ್ಲಿ ಗುಟ್ಕಾ, ಪಾನ್ ಮಸಾಲಾ ಮತ್ತು ತಂಬಾಕು ಜಗಿಯುವುದನ್ನು ಮತ್ತು ಉಗುಳುವುದನ್ನು ನಿರ್ಬಂಧಿಸುವುದು. ಕಚೇರಿಯ ಆವರಣದಲ್ಲಿ ಧೂಮಪಾನ ಮಾಡುವುದನ್ನು ಕಡ್ಡಾಯವಾಗಿ ನಿಷೇಧಿಸುವುದು.

9. ಅಧಿಕಾರಿ/ನೌಕರರು ಗುಂಪುಗೂಡುವುದು ಮತ್ತು ಸಭೆ ನಡೆಸುವುದನ್ನು ನಿರ್ಬಂಧಿಸಿದೆ. ಆದಾಗ್ಯೂ ಕಚೇರಿಯ ಅಧಿಕೃತ ತುರ್ತು ಸಭೆಗಳನ್ನು ಸಾಮಾಜಿಕ ಅಂತರವನ್ನು ಪಾಲಿಸಿ ಅಥವಾ ವಿಡಿಯೋ ಕಾನ್ಫರೆನ್ಸ್ ಮೂಲಕವೇ ನಡೆಸುವುದು.

10. ಕೆಲಸ ನಿರ್ವಹಿಸುವ ಎಲ್ಲಾ ಸಿಬ್ಬಂದಿಗಳಿಗೆ **ಮಾಸ್ಕ್** ಧರಿಸುವುದು ಕಡ್ಡಾಯವಾಗಿರುತ್ತದೆ. ಮೂಗು ಹಾಗೂ ಬಾಯಿಯನ್ನು ಮುಚ್ಚಿರುವಂತೆ ಮಾಸ್ಕ್ ಅನ್ನು ಸರಿಯಾದ ಕ್ರಮದಲ್ಲಿ ಧರಿಸುವುದು.

11. ಜ್ವರ ಒಣ ಕೆಮ್ಮು, ಉಸಿರಾಟದ ತೊಂದರೆ, ದೇಹದ ನೋವು, ನೆಗಡಿ, ಗಂಟಲು ಕೆರೆತ ಮತ್ತು ಅತಿಸಾರ ಮುಂತಾದ ಯಾವುದೇ ಲಕ್ಷಣಗಳು ಇರುವ ಅಧಿಕಾರಿ/ನೌಕರರನ್ನು ಕಚೇರಿಗೆ ಪ್ರವೇಶಿಸಿದಂತೆ ನಿಷೇಧಿಸುವುದು ಹಾಗೂ ಅಂತಹ ಅಧಿಕಾರಿ/ನೌಕರರನ್ನು ಸ್ಥಳೀಯ ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಂದ ತಪಾಸಣೆಗೆ ಒಳಪಡಿಸುವುದು.

12. ಕೋವಿಡ್–19 ಹರಡುವಿಕೆಯನ್ನು ತಡೆಗಟ್ಟಲು ನೈರ್ಮಲ್ಯತೆ ಮತ್ತು ಮುಂಜಾಗರೂಕತಾ ಕ್ರಮಗಳ ಬಗ್ಗೆ ಮಾರ್ಗಸೂಚಿಗಳನ್ನು ಕಚೇರಿಯ ಪ್ರವೇಶ ದ್ವಾರದಲ್ಲಿ ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರದರ್ಶಿಸುವುದು.

13. ಎಲ್ಲಾ ಅಧಿಕಾರಿ/ನೌಕರರು 'ಆರೋಗ್ಯ ಸೇತು ಆ್ಯಪ್' ಬಳಸಲು ಉತ್ತೇಜಿಸುವುದು.

"ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿರುತ್ತದೆ"

20/6/20

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

<u>ಗೆ:</u>

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in/ for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:–</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.